**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಎಸ್ ರುದ್ರೇಗೌಡ ಇವರು ಶೂನ್ಯ ವೇಳೆಯಲ್ಲಿ ಸಾರ್ವಜನಿಕ ಮಹತ್ವದ ವಿಷಯವನ್ನು ಪ್ರಸ್ತಾಪಿಸಿರುವ ವಿಷಯಕ್ಕೆ ಉತ್ತರ**

**ವಿಷಯ:**

ತುಮಕೂರು ಜಿಲ್ಲೆಯಲ್ಲಿರುವ ಹಿಂದುಳಿದ ವರ್ಗಗಳ ಇಲಾಖೆಯಡಿಯಲ್ಲಿರುವ ಬಹುತೇಕ ವಿದ್ಯಾರ್ಥಿ ನಿಲಯಗಳ ನಿಲಯ ಪಾಲಕರು ತುಮಕೂರಿನ ಸಿದ್ದಗಂಗಾ ಮಠದಿಂದ ಅಕ್ಕಿಯನ್ನು ಸಾಲ ಪಡೆದಿರುವುದು ಇದೀಗ ಬಹಿರಂಗವಾಗಿದೆ

ಅನ್ನಭಾಗ್ಯ ಯೋಜನೆ ಮೂಲಕ ಕರ್ನಾಟಕವನ್ನು ಹಸಿವು ಮುಕ್ತಗೊಳಿಸುತ್ತೇವೆ ಎಂದು ಕಾಂಗ್ರೆಸ್ ಸರ್ಕಾರವು ಭರ್ಜರಿ ಪ್ರಚಾರ ಪಡೆದುಕೊಂಡಿರುವ ಬೆನ್ನಲ್ಲೇ ತುಮಕೂರು ಜಿಲ್ಲೆಯ ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳ ವಾರ್ಡನ್ ಗಳು ಸಿದ್ದಗಂಗಾ ಮಠದಿಂದ ಸಾಲ ಪಡೆದಿರುವುದು ಮುನ್ನಲೆಗೆ ಬಂದಿದೆ

ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳಲ್ಲಿ ಅಕ್ಕಿ ದಾಸ್ತಾನು ಇಲ್ಲ ಎಂಬ ಕುರಿತು ಕರ್ನಾಟಕ ರಾಷ್ಟ್ರ ಸಮಿತಿಯ ರಾಜ್ಯ ಕಾರ್ಯದರ್ಶಿ ಮಲ್ಲಿಕಾರ್ಜುನ ಭಟ್ಟರಹಳ್ಳಿ ಅವರಿಗೆ ಹಲವರು ದೂರು ನೀಡಿದ್ದರು. ಈ ದೂರನ್ನಾದರಿಸಿ ಹಿಂದುಳಿದ ವರ್ಗಗಳ ಜಿಲ್ಲಾ ಮತ್ತು ತಾಲ್ಲೂಕು ಕಲ್ಯಾಣಾಧಿಕಾರಿಗಳನ್ನು ಸಂಪರ್ಕಿಸಿದ್ದರು. ಅಲ್ಲದೇ ಇವರೊಂದಿಗಿನ ಮಾತುಕತೆ ವೇಳೆಯಲ್ಲಿ ಅಕ್ಕಿ ದಾಸ್ತಾನು ಇಲ್ಲ. ಅದೇ ರೀತಿ ಅನುದಾನವೂ ಬಿಡುಗಡೆಯಾಗಿಲ್ಲ ಎಂಬ ಮಾಹಿತಿ ಹೊರಬಿದ್ದಿದೆ. ಅದೇ ರೀತಿ ಸಿದ್ದಗಂಗಾ ಮಠದಿಂದ ಅಕ್ಕಿಯನ್ನು ಸಾಲ ಪಡೆದಿರುವುದನ್ನು ಜಿಲ್ಲಾ ಮತ್ತು ತಾಲ್ಲೂಕು ಕಲ್ಯಾಣಾಧಿಕಾರಿಗಳು ಖಚಿತಪಡಿಸಿರುತ್ತಾರೆ. ಅಕ್ಕಿ ಕೊರತೆಗೆ ಸಂಬಂಧಿಸಿದಂತೆ ಹಾಸ್ಟೆಲ್ ಗಳ ನಿಲಯ ಪಾಲಕರು ಮೇಲಾಧಿಕಾರಿಗಳಿಗೆ ದಾಸ್ತಾನಿನ ಕುರಿತು ಸಲ್ಲಿಸಿದ್ದ ಮಾಹಿತಿಯು "the file.in"ಗೆ ಲಭ್ಯವಾಗಿದೆ.

ಅಕ್ಕಿ ಕೊರತೆ ಉಂಟಾಗಿರುವ ಕುರಿತು ನಿಲಯ ಪಾಲಕರು ಲಿಖಿತವಾಗಿ ಮಾಹಿತಿ ನೀಡಿದ್ದರೂ ಸರಕಾರವಾಗಲೀ ಇಲಾಖೆ ಮುಖ್ಯಸ್ಥರಾಗಲೀ ಇದುವರೆಗೂ ಕ್ರಮ ಕೈಗೊಂಡಿಲ್ಲ. ಹೀಗಾಗಿ ನಿಲಯ ಪಾಲಕರು ಬೇರೆ ದಾರಿಯಿಲ್ಲದೇ ತುಮಕೂರಿನ ಸಿದ್ದಗಂಗಾ ಮಟದಿಂದಲೇ ಅಕ್ಕಿಯನ್ನು ಸಾಲ ಪಡೆದಿದ್ದಾರೆ ಎಂಬ ಮಾಹಿತಿಯು ತಿಳಿದು ಬಂದಿದೆ. ಅಲ್ಲದೇ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಶಿವರಾಜ್ ತಂಗಡಗಿ ಸಹ ವಿದ್ಯಾರ್ಥಿನಿಲಯಗಳಲ್ಲಿ ಅಕ್ಕಿ ದಾಸ್ತಾನು ಲಭ್ಯತೆ ಕೊರತೆ ಕುರಿತು ಅಧಿಕಾರಿಗಳೊಂದಿಗೆ ಚರ್ಚಿಸಿಯೂ ಇಲ್ಲ ಎಂದು ಗೊತ್ತಾಗಿದೆ.

ತುಮಕೂರು ಜಿಲ್ಲೆ ಸೇರಿದಂತೆ ರಾಜ್ಯ ಹಲವು ಜಿಲ್ಲೆಗಳಲ್ಲಿನ ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯಗಳಿಗೆ ಮಾಸಿಕ ಬೇಡಿಕೆ ಪಟ್ಟಿಯಂತೆ ಅಕ್ಕಿ ಹಂಚಿಕೆಯಾಗಿಲ್ಲ. ಕೆಲವು ಜಿಲ್ಲೆಗಳಲ್ಲಿ ಅಕ್ಕಿ ಹಂಚಿಕೆಯಾಗಿದ್ದರೂ ವಿದ್ಯಾರ್ಥಿ ನಿಲಯಗಳಿಗೆ ಬಿಡುಗಡೆ ಮಾಡಿಲ್ಲ. ಹೀಗಾಗಿ ಅಕ್ಕಿಯನ್ನು ಎತ್ತುವಳಿ ಮಾಡಿಲ್ಲ. ಮೇಲಾಧಿಕಾರಿಗಳ ನಿರ್ಲಕ್ಷವೇ ಅಕ್ಕಿ ಪರದಾಟಕ್ಕೆ ಮೂಲ ಕಾರಣ ಎನ್ನಲಾಗಿದೆ. 'ಜನವರಿಯಿಂದ ಮಾರ್ಚವರೆಗೆ ಅಕ್ಕಿಗಾಗಿ ಬೇಡಿಕೆ ಪಟ್ಟಿ ಸಲ್ಲಿಸಿದ್ದೆವು. ಇನ್ನೂ ಅಲಾಟ್ ಮೆಂಟ್ ಆಗಿಲ್ಲ ವೇಯ್ಟ್ ಮಾಡುತ್ತಿದ್ದೇವೆ. ಹೇಡ್ ಆಫೀಸ್ ನಿಂದ ಇನ್ನೂ ಅನುದಾನ ಬಂದಿಲ್ಲ. ನಮ್ಮ ತಾಲ್ಲೂಕಲ್ಲಿ ಹಣವಿಲ್ಲ. ಇದು ನಮ್ಮ ತಾಲ್ಲೂಕಿನಷ್ಟೆ ಅಲ್ಲ, ಇಡೀ ರಾಜ್ಯದ ಪರಿಸ್ಥಿತಿಯೂ ಇದೇ ರೀತಿ ಇದೆ, ' ಎಂದು ತಾಲ್ಲೂಕು ಮಟ್ಟದ ಅಧಿಕಾರಿಯೊಬ್ಬರು ಕರ್ನಾಟಕ ರಾಷ್ಟ್ರ ಸಮಿತಿಯ ರಾಜ್ಯ ಕಾರ್ಯದರ್ಶಿ ಮಲ್ಲಿಕಾರ್ಜುನ ಭಟ್ಟರಹಳ್ಳಿ ಅವರೊಂದಿಗೆ ನಡೆದ ಮಾತುಕತೆ ವೇಳೆಯಲ್ಲಿ ವಾಸ್ತವ ಸ್ಥಿತಿಯನ್ನು ಬಿಚ್ಚಿಟ್ಟಿದ್ದಾರೆ.ಈ ವಿಷಯವಾಗಿ ಶೂನ್ಯ ವೇಳೆಯಲ್ಲಿ ಸರ್ಕಾರದ ಗಮನಕ್ಕೆ ತರುವ ಬಗ್ಗೆ.

**ಉತ್ತರ:**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧೀನದಲ್ಲಿ 1277 ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು ಹಾಗೂ 1168 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಸದರಿ ವಿದ್ಯಾರ್ಥಿನಿಲಯಗಳಲ್ಲಿ 228661 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶವಿರುತ್ತದೆ.

ಇಲಾಖೆಯ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಲ್ಲಿನ ನಿಲಯಾರ್ಥಿಗಳಿಗೆ ಮಾಹೆಯಾನ ರೂ.1650/- ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿನ ನಿಲಯಾರ್ಥಿಗಳಿಗೆ ಮಾಹೆಯಾನ ರೂ.1750/- ಭೋಜನಾ ವೆಚ್ಚವನ್ನು ಭರಿಸಲಾಗುತ್ತಿದೆ. ಮಾಸಿಕ ಭೋಜನಾ ವೆಚ್ಚಗಳ ಅನುಸಾರ ರಾಜ್ಯದ ವಿವಿಧ ಪ್ರಾಂತ್ಯಗಳಿಗೆ ಅನುಗುಣವಾಗಿ ಮೆನು ಸಿದ್ಧಪಡಿಸಿ ಅದರನ್ವಯ ವಿದ್ಯಾರ್ಥಿಗಳಿಗೆ ಊಟ ಮತ್ತು ತಿಂಡಿಯನ್ನು ನೀಡಲಾಗುತ್ತಿದೆ.

ಇಲಾಖಾ ವಿದ್ಯಾರ್ಥಿನಿಲಯಗಳಿಗೆ ಅಗತ್ಯವಿರುವ ಆಹಾರ ಸಾಮಾಗ್ರಿಗಳನ್ನು (ಅಕ್ಕಿ ಮತ್ತು ಗೋಧಿಯನ್ನು ಹೊರತುಪಡಿಸಿ) ಜಿಲ್ಲಾ ಹಂತದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಟೆಂಡರ್ ಆಹ್ವಾನಿಸಿ ಸರಬರಾಜು ಪಡೆಯಲಾಗುತ್ತಿದ್ದು, ಪಡಿತರ ಅಕ್ಕಿ ಮತ್ತು ಗೋಧಿಯನ್ನು Welfare Institutions and Hostels Scheme ರಡಿ ಪ್ರತಿ ವಿದ್ಯಾರ್ಥಿಗೆ ಮಾಹೆಯಾನ 10 ಕೆ.ಜಿ ಅಕ್ಕಿ ಮತ್ತು 5 ಕೆ.ಜಿ ಗೋಧಿಯನ್ನು ಕೇಂದ್ರ ಸರ್ಕಾರದಿಂದ ರಿಯಾಯಿತಿ ದರಗಳಲ್ಲಿ ಪಡೆಯಲಾಗುತ್ತಿದೆ.

ಪ್ರತಿ ಆರ್ಥಿಕ ವರ್ಷದಲ್ಲಿ ಎರಡು ಕಂತುಗಳಲ್ಲಿ ಅಂದರೆ ಏಪ್ರಿಲ್ ನಿಂದ ಸೆಪ್ಟೆಂಬರ್ ರವರೆಗೆ ಮೊದಲ ಅರ್ಧ ವಾರ್ಷಿಕ ಅವಧಿಗೆ ಹಾಗೂ ಅಕ್ಟೋಬರ್ ನಿಂದ ಮಾರ್ಚ್ ರವರೆಗೆ ಎರಡನೇ ಅರ್ಧ ವಾರ್ಷಿಕ ಅವಧಿಗೆ ಕೇಂದ್ರ ಸರ್ಕಾರದಿಂದ ನೇರವಾಗಿ ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಅಕ್ಕಿ ಮತ್ತು ಗೋಧಿ ಬಿಡುಗಡೆಯಾಗುತ್ತದೆ.

2023-24ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸಂಬಂಧಿಸಿದಂತೆ, ಮೊದಲನೇ ಅರ್ಧವಾರ್ಷಿಕ ಅವಧಿಗೆ (ಏಪ್ರಿಲ್-2023 ರಿಂದ ಸೆಪ್ಟೆಂಬರ್-2023 ರವರೆಗೆ) 13,229.82 ಟನ್ ಅಕ್ಕಿ ಮತ್ತು 6614.91 ಟನ್ ಗೋಧಿ ಜೂನ್ ಮಾಹೆಯಲ್ಲಿ ಬಿಡುಗಡೆಯಾಗಿದ್ದು, ಮಾಹೆಯಾನ ವಿದ್ಯಾರ್ಥಿನಿಲಯಗಳ ಬೇಡಿಕೆಯನುಸಾರ ಜಿಲ್ಲಾ ಹಂತದಲ್ಲಿ ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯಿಂದ ಅಕ್ಕಿ ಮತ್ತು ಗೋಧಿಯನ್ನು ಎತ್ತುವಳಿ ಮಾಡಿಕೊಂಡು ವಿದ್ಯಾರ್ಥಿಗಳಿಗೆ ವಿನಿಯೋಗಿಸಲಾಗಿರುತ್ತದೆ

ಎರಡನೇ ಅರ್ಧವಾರ್ಷಿಕ ಅವಧಿಗೆ (ಅಕ್ಟೋಬರ್-2023 ರಿಂದ ಮಾರ್ಚ್-2024 ರವರೆಗೆ) 13,229.82 ಟನ್ ಅಕ್ಕಿ ಮತ್ತು 6614.91 ಟನ್ ಗೋಧಿ ಜನವರಿ ಮಾಹೆಯಲ್ಲಿ ಬಿಡುಗಡೆಯಾಗಿದ್ದು, ತಡವಾಗಿ ಬಿಡುಗಡೆಯಾಗಿರುತ್ತದೆ. ವಿದ್ಯಾರ್ಥಿನಿಲಯಗಳ ಬೇಡಿಕೆಯನುಸಾರ ಎತ್ತುವಳಿ ಮಾಡಿ ವಿನಿಯೋಗಿಸಲಾಗುತ್ತಿದೆ.

3...

ಪ್ರಸಕ್ತ ಸಾಲಿನಲ್ಲಿ ನಿಗಧಿತ ಪ್ರಮಾಣದಲ್ಲಿ ಅಕ್ಕಿ ಮತ್ತು ಗೋಧಿಯು ಸರಬರಾಜಾಗಿದ್ದು, ರಾಜ್ಯದ ಯಾವುದೇ ಜಿಲ್ಲೆಯ ವಿದ್ಯಾರ್ಥಿ ನಿಲಯಗಳಲ್ಲಿ ಅಕ್ಕಿ ಮತ್ತು ಗೋಧಿಯ ಕೊರತೆಯಾಗಿರುವುದಿಲ್ಲ.

ತುಮಕೂರು ಜಿಲ್ಲೆಯಲ್ಲಿ 113 ವಿದ್ಯಾರ್ಥಿ ನಿಲಯಗಳು ಕಾರ್ಯನಿರ್ವಹಿಸುತ್ತಿದ್ದು 10461 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶವನ್ನು ಕಲ್ಪಿಸಲಾಗಿರುತ್ತದೆ. ಈ ಪೈಕಿ ತುಮಕೂರು ತಾಲ್ಲೂಕಿನಲ್ಲಿ 20 ವಿದ್ಯಾರ್ಥಿ ನಿಲಯಗಳು ಕಾರ್ಯನಿರ್ವಹಿಸುತ್ತಿದ್ದು 2747 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಕಲ್ಪಿಸಲಾಗಿರುತ್ತದೆ.

ತುಮಕೂರು ಜಿಲ್ಲೆಯ ವಿದ್ಯಾರ್ಥಿನಿಲಯಗಳಿಗೆ ಏಪ್ರಿಲ್-2023ರಿಂದ ಸೆಪ್ಟೆಂಬರ್-2023ರ ಮೊದಲನೇ ಅರ್ಧ ವಾರ್ಷಿಕ ಅವಧಿಗೆ 722.25 ಟನ್ ಅಕ್ಕಿ 361.11 ಟನ್ ಗೋಧಿ ಜೂನ್ ಮಾಹೆಯಲ್ಲಿ ಬಿಡುಗಡೆಯಾಗಿದ್ದು ಪಡಿತರ ಅಕ್ಕಿ ಗೋದಿಯನ್ನು ನಿಯಮಾನುಸಾರ ಎತ್ತುವಳಿ ಮಾಡಿ ವಿದ್ಯಾರ್ಥಿನಿಲಯಗಳ ನಿಲಯಾರ್ಥಿಗಳ ಉಪಯೋಗಕ್ಕಾಗಿ ಬಳಸಲಾಗಿರುತ್ತದೆ. ಎರಡನೇ ಅರ್ಧ ವಾರ್ಷಿಕ ಅವಧಿಗೆ ಅಕ್ಟೋಬರ್-2023ರಿಂದ ಮಾರ್ಚ್ 2024ರವರೆಗೆ 701.68 ಟನ್ ಅಕ್ಕಿ ಮತ್ತು 350.26 ಟನ್ ಗೋಧಿ ಜನವರಿ ಮಾಹೆಯಲ್ಲಿ ಬಿಡುಗಡೆಯಾಗಿದ್ದು ವಿದ್ಯಾರ್ಥಿ ನಿಲಯಗಳ ಬೇಡಿಕೆಯನುಸಾರ ಎತ್ತುವಳಿ ಮಾಡಿ ವಿನಿಯೋಗಿಸಲಾಗುತ್ತಿದೆ.

ವಿದ್ಯಾರ್ಥಿ ನಿಲಯಗಳ ವಿದ್ಯಾರ್ಥಿಗಳಿಗೆ ಅಗತ್ಯವಿರುವ ಆಹಾರ ಸಾಮಗ್ರಿಗಳನ್ನು ಟೆಂಡರ್ ಮೂಲಕ ಪಡೆಯಾಗುತ್ತಿದ್ದು, ಪಡಿತರ ಅಕ್ಕಿ ಮತ್ತು ಗೋಧಿಯನ್ನು Welfare Institutions and Hostels Scheme ರಡಿ ಕೇಂದ್ರ ಸರ್ಕಾರದಿಂದ ಪಡೆಯಲಾಗುತ್ತಿದೆ. ಒಂದು ವೇಳೆ ಪಡಿತರ ಅಕ್ಕಿ ಮತ್ತು ಗೋಧಿ ಬಿಡುಗಡೆಯಾಗುವುದು ತಡವಾದಲ್ಲಿ ಅಥವಾ ಕೊರತೆಯಾದಲ್ಲಿ ಆಯಾ ಜಿಲ್ಲೆಗೆ ಟೆಂಡರ್‌ನಲ್ಲಿ ಆಹಾರ ಸಾಮಗ್ರಿಗಳನ್ನು ಸರಬರಾಜು ಮಾಡಲು ಆಯ್ಕೆಯಾದ ಸಂಸ್ಥೆಯಿಂದ ಖರೀದಿಸಲು ಅವಕಾಶವಿದ್ದು ಬೇರೆ ಮೂಲಗಳಿಂದ ಪಡೆಯಲು ನಿಯಮಾನುಸಾರ ಅವಕಾಶ ಇರುವುದಿಲ್ಲ. ಆದರೂ ಸಹ ತುಮಕೂರು ತಾಲ್ಲೂಕಿನ ವಿದ್ಯಾರ್ಥಿ ನಿಲಯಗಳಿಗೆ ಶ್ರೀ ಸಿದ್ಧಗಂಗಾ ಮಠದ ಅನಾಥಾಲಯಕ್ಕೆ ಆಹಾರ ಮತ್ತು ನಾಗರೀಕ ಸರಬರಾಜು ನಿಗಮದಿಂದ ಹಂಚಿಕೆಯಾಗಿದ್ದ ಅಕ್ಕಿಯನ್ನು ತುಮಕೂರು ತಾಲ್ಲೂಕಿನ ಕಲ್ಯಾಣಾಧಿಕಾರಿಗಳು ನಿಯಮಬಾಹಿರವಾಗಿ ಎರವಲು ಪಡೆದಿರುವುದು ತಿಳಿದುಬಂದಿದ್ದು, ಸದರಿ ಅಧಿಕಾರಿಯ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸಲು ಕ್ರಮ ವಹಿಸಲಾಗಿದೆ.

ಸಂಖ್ಯೆ: ಹಿಂವಕ 225 ಬಿಎಂಎಸ್ 2024

**(ಶಿವರಾಜ್ ಎಸ್ ತಂಗಡಗಿ )**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು